ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಶಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ

ದಿನಾಂಕ : DATE: 19/9/2020

# ಕರ್ನಾಟಕ ಭವನ ಪುನರ್ ನಿರ್ಮಾಣಕ್ಕೆ ಶಿಲಾನ್ಯಾಸ

ನವದೆಹಲಿ: ರಾಷ್ಟ್ರದ ರಾಜಧಾನಿಯಲ್ಲಿ 120 ಕೋಟಿ ರೂ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಕರ್ನಾಟಕ ಭವನ-1 ಕಾವೇರಿ ಕಟ್ಟಡದ ಪುನರ್ನಿರ್ಮಾಣ ಕಾಮಗಾರಿಗಳಿಗೆ ಸಿಎಂ ಯಡಿಯೂರಪ್ಪ ಶುಕ್ರವಾರ ಚಾಲನೆ ನೀಡಿದರು.

ಎರಡು ತಳ ಮಹಡಿಗಳೂ, ನೆಲ ಮಹಡಿ ಹಾಗೂ 6 ಅಂತಸ್ತು ಒಳಗೊಂಡಂತೆ ಒಟ್ಟು 9 ಮಹಡಿಗಳ ಈ ಕಟ್ಟಡವನ್ನು ಮುಂದಿನ 24 ತಿಂಗಳಲ್ಲಿ ಕಟ್ಟಡದ ಕಾಮಗಾರಿಗಳು ಪೂರ್ಣಗೊಳಿಸಲಾಗುವುದು ಎಂದರು.

ಉದ್ದೇಶಿತ ಕಟ್ಟಡದ ನೀಲನಕ್ಷೆ ಹಾಗೂ ಹಾಲಿ ಕಟ್ಟದ ಸ್ಥಳ ಸಮೀಕ್ಷೆ ಮಾಡಿ, ಗಣ್ಯರನ್ನು ಭೇಟಿ ಮಾಡಲು ಆಗಮಿಸುವ ಸಂದರ್ಶಕರಿಂದ, ಗಣ್ಯರ ಖಾಸಗೀತನಕ್ಕೆ ಧಕ್ಕೆಯಾಗದಂತೆ ನೋಡಿಕೊಳ್ಳಲು ಪ್ರತಿ ಐಷಾರಾಮಿ ಕೊಠಡಿಯಲ್ಲೂ ಒಂದು ಹೆಚ್ಚಿನ ಶೌಚಾಲಯವನ್ನು ನಿರ್ಮಿಸಲು ಯೋಜಿಸಲಾಗಿದೆ. ಅದರಂತೆ, ಮಾರ್ಪಡಿತ ಅಂದಾಜುಪಟ್ಟಿ ಮೊತ್ತ 120 ಕೋಟಿ ರೂ ಗಳಿಗೆ ಪರಿಷ್ಕೃತ ಆಡಳಿತಾತ್ಮಕ ಅನುಮೋದನೆ ದೊರೆತಿದೆ ಎಂದರು.



ಜಾತ್ಯತೀತ ಜನತಾ ದಳದ ಮುಖಂಡ ಹಾಗೂ ಮಾಜಿ ಮುಖ್ಯಮಂತ್ರಿ ಎಚ್. ಡಿ. ಕುಮಾರಸ್ವಾಮಿ ಹಾಗೂ ತಮ್ಮ ನಡುವಿನ ಇತ್ತೀಚಿನ ಭೇಟಿ ಕುರಿತು ಸುದ್ದಿಗಾರರೊಂದಿಗೆ ಕೇಳಿದ ಪ್ರಶ್ನೆಗೆ, ಕುಮಾರಸ್ವಾಮಿ ಅವರು ಪ್ರತಿಪಕ್ಷದ ನಾಯಕರಲ್ಲೊಬ್ಬರು. ತಮ್ಮ ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಿಸಿದಂತೆ ಚರ್ಚಿಸಲು ಆಗಮಿಸಿದ್ದರು. ಇಂತಹ ವಿಷಯಗಳಲ್ಲಿ ಅನಗತ್ಯ ಊಹಾಪೋಹ ಬೇಡ ಎಂದು ಉತರಿಸಿದರು.

ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಖಾತೆಗಳ ಹೊತ್ತ ಉಪ ಮುಖ್ಯಮಂತ್ರಿ ಗೋವಿಂದ ಎಂ ಕಾರಜೋಳ, ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವ ಡಿ.ವಿ. ಸದಾನಂದಗೌಡ, ಕೇಂದ್ರ ಸಂಸದೀಯ ವ್ಯಹಾರಗಳು, ಗಣಿ ಮತ್ತು ಕಲ್ಲಿದ್ದಲು ಸಚಿವ ಪ್ರಹ್ಲಾದ ಜೋಶಿ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ. ಎಂ. ವಿಜಯ್ ಭಾಸ್ಕರ್, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಡಾ ಇ ವಿ ರಮಣ ರೆಡ್ಡಿ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳೂ ಆದ ಕರ್ನಾಟಕ ಭವನದ ನಿವಾಸಿ ಆಯುಕ್ತ ಡಾ ಸಂದೀಪ್ ದವೆ ಸೇರಿದಂತೆ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

## ಪುತ್ರನ ವಿರುದ್ಧ ಪಿತೂರಿ

ತಮ್ಮ ಪುತ್ರ ಬಿ ವೈ ವಿಜಯೇಂದ್ರ ಅವರನ್ನು ಸೂಪರ್ ಮುಖ್ಯಮಂತ್ರಿ ಎಂದು ಬಣ್ಣಿಸಿದ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರ ಆರೋಪವನ್ನು ತಳ್ಳಿ ಹಾಕಿದ ಮುಖ್ಯಮಂತ್ರಿ, ವಿಜಯೇಂದ್ರ ಅವರು ಭಾರತೀಯ ಜನತಾ ಪಕ್ಷದ ರಾಜ್ಯ ಘಟಕದಲ್ಲಿ ಉಪಾಧ್ಯಕ್ಷರಾಗಿ ರಾಜ್ಯದಲ್ಲಿ ಪಕ್ಷವನ್ನು ಸಂಘಟಿಸುವಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆಯೇ ಹೊರತು, ರಾಜ್ಯ ಸರ್ಕಾರದ ಯಾವುದೇ ಚಟುವಟಿಕೆಗಳಲ್ಲಿ ಹಸ್ತಕ್ಷೇಪ ಮಾಡುತ್ತಿಲ್ಲ ಎಂದು ಸ್ಪಷ್ಟಪಡಿಸಿದರು. ಇಂತಹ ಆರೋಪ ನಿಮಗೆ ಶೋಭೆ ತರದು ಎಂದು ಅಸಮಾಧಾನ ವ್ಯಕ್ತಪಡಿಸಿದರು.

## ಪ್ರಹ್ಲಾದ್ ಜೋಷಿ ಮುನಿಸು

ಸಮಾರಂಭಕ್ಕೆ ಅಧಿಕೃತ ಆಹ್ವಾನ ನೀಡದಿರುವ ಬಗ್ಗೆ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಷಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ ಘಟನೆ ನಡೆಯಿತು. ಸರ್ಕಾರದ ಮುಖ್ಯಕಾರ್ಯದರ್ಶಿ ವಿಜಯಭಾಸ್ಕರ್ ಅವರನ್ನು ತರಾಟೆಗೆ ತೆಗೆದುಕೊಂಡರಲ್ಲದೆ ಉದ್ದೇಶಪೂರ್ವಕವಾಗಿ ಅವಮಾನಿಸಿದೀರಿ ಎಂದು ರೇಗಿದರು. ಒಂದು ಹಂತದಲ್ಲಿ ಸಮಾರಂಭ ಬಹಿಷ್ಕರಿಸಿ ಹೊರನಡೆಯಲು ಮುಂದಾದಾಗ ಸಚಿವ ಸದಾನಂದಗೌಡ ಮತ್ತಿತರರು ಸಮಾಧಾನಿಸಿ ಕರೆತರಬೇಕಾಯಿತು.